**ಕರ್ನಾಟಕ ಸರ್ಕಾರದ ನಡವಳಿ**

ವಿಷಯ: ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ ಇವರ ಪತ್ರ ಸಂಖ್ಯೆ:ಜಿಪಂದಾಆ(2):ಸಿಸಿಎ:ಸಿಆರ್:01/2017-18, ದಿನಾಂಕ: 05-04-2017.
2. ಸರ್ಕಾರದ ಕಾರಣ ಕೇಳುವ ನೋಟೀಸು ಸಂಖ್ಯೆ: ಗ್ರಾಅಪ:467:ಗ್ರಾಪಂಅ:2017, ದಿನಾಂಕ: 01-07-2017.
3. ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು ಇವರು ಸರ್ಕಾರದ ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 20-07-2017.
4. ವಿಚಾರಣೆಗೆ ಹಾಜರಾಗುವ ತಿಳುವಳಿಕೆ ಪತ್ರ ಸಂಖ್ಯೆ: ಗ್ರಾಅಪ:467:ಗ್ರಾಪಂಅ:2017, ದಿನಾಂಕ: 09-08-2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರು ಜಗಳೂರು ತಾಲ್ಲೂಕು, ಬಿಸ್ತುವಳ್ಳಿ ಗ್ರಾಮ ಪಂಚಾಯಿತಿಯಲ್ಲಿ 2016-17ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ ಕಾಮಗಾರಿ ಅನುಷ್ಠಾನಗೊಳಿಸಿದ ಬಗ್ಗೆ ದೂರು ಬಂದ ಹಿನ್ನೆಲೆಯಲ್ಲಿ ಸಹಾಯಕ ಯೋಜನಾಧಿಕಾರಿ (ಡಿ.ಆರ್.ಡಿ.ಎ) & (ಎಸ್.ಜಿ.ಎಸ್.ವೈ) ರವರಿಂದ ತನಿಖೆ ನಡೆಸಿ 11 ಕಾಮಗಾರಿಗಳ ಅನುಷ್ಠಾನದಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ ರೂ. 16,04,440/-ಗಳನ್ನು ಪಾವತಿಸಿ ಸರ್ಕಾರದ ಹಣ ದುರುಪಯೋಗಕ್ಕೆ ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯಿತಿ ಇವರು ಪರೋಕ್ಷವಾಗಿ ಸಹಕರಿಸಿರುವುದು ಕಂಡುಬರುತ್ತದೆಂದು ತಿಳಿಸುತ್ತಾ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ನೋಟೀಸಿನಲ್ಲಿ ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು ಇವರಿಗೆ ಕಾರಣ ಕೇಳುವ ನೋಟೀಸು ಜಾರಿ ಮಾಡಿ ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಅವರ ಸಮಜಾಯಿಷಿ ಕೇಳಲಾಗಿತ್ತು.

ಈ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು ಸಲ್ಲಿಸಿರುವ ಉತ್ತರದಲ್ಲಿ 2016-17ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳ ಅನುಷ್ಠಾನದಲ್ಲಿ ನಾನು ಯಾವುದೇ ರೀತಿಯ ನನ್ನ ವ್ಯಾಪ್ತಿಗೆ ಒಳಪಟ್ಟಂತೆ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವುದಿಲ್ಲ. ದಿನಾಂಕ: 28.03.2017ರಂದು ಬಿಸ್ತುವಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಕೈಗೊಳ್ಳಲಾದ 11 ಕಾಮಗಾರಿಗಳ ವಾಸ್ತವವನ್ನು ಪರಿಶೀಲಿಸಿದ ಜಿಲ್ಲಾ ಪಂಚಾಯತ್ ಸಹಾಯಕ ಸಂಯೋಜನಾಧಿಕಾರಿಗಳು ನೀಡಿದಂತಹ ವರದಿಯಲ್ಲೂ ಸಹಾ ಅಧ್ಯಕ್ಷಳಾದ ತಾನು ಯಾವುದೇ ಕರ್ತವ್ಯಲೋಪ ಎಸಗಿರುವುದಿಲ್ಲ. ಸದರಿ ವಿಚಾರವಾಗಿ ನನ್ನ ಮೇಲೆ ಈಗಾಗಲೇ ಜಗಳೂರು ಪೋಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು ಠಾಣಾ ಗುನ್ನ ನಂ. 99/2017 ದಾಖಲಾಗಿರುತ್ತದೆ. ಸದರಿ ಕೇಸ್ ಮಾನ್ಯ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯದಲ್ಲಿ ತಾನು ಜಮೀನು

ಪಡೆದುಕೊಂಡಿರುವುದಾಗಿ ತಿಳಿಸಿರುತ್ತಾರೆ. ಅನಾವಶ್ಯಕವಾಗಿ ಅಧ್ಯಕ್ಷರ ವ್ಯಾಪ್ತಿ ಇಲ್ಲದ ನ್ಯೂನತೆಗಳನ್ನು ನನ್ನ ಮೇಲೆ ಆಪಾದನೆ ಮಾಡಿರುವುದು ಸರಿಯಲ್ಲ ಎಂದು ತಮ್ಮ ಹೇಳಿಕೆಯನ್ನು ನೀಡಿರುತ್ತಾರೆ.

ಮೇಲೆ ಓದಲಾದ (4)ರಲ್ಲಿ ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ:22-08-2017 ರಂದು ಜರುಗಿದ ವಿಚಾರಣೆಯಲ್ಲಿ ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯತ್ ದಾವಣಗೆರೆ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಜಗಳೂರು, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಿಸ್ತುವಳ್ಳಿ ಗ್ರಾಮ ಪಂಚಾಯಿತಿ ಹಾಗೂ ಆಪಾದಿತ ಅಧ್ಯಕ್ಷರು ಹಾಜರಾಗಿರುತ್ತಾರೆ.

ಸರ್ಕಾರವು ಈ ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು 2016-17ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ ಕಾಮಗಾರಿ ಅನುಷ್ಠಾನಗೊಳಿಸುವಲ್ಲಿ ನೇರವಾಗಿ ಭಾಗವಹಿಸಿದ್ದರ ಬಗ್ಗೆ ಹೂಡಿರುವ ಕ್ರಿಮಿನಲ್ ಮೊಕದ್ದಮೆಯ ಅಂತಿಮ ಆದೇಶದ ಷರತ್ತಿಗೆ ಒಳಪಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/467/ಗ್ರಾಪಂಅ/2017, ಬೆಂಗಳೂರು, ದಿನಾಂಕ:09-04-2018.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು 2016-17ನೇ ಸಾಲಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಮಾರ್ಗಸೂಚಿ ಉಲ್ಲಂಘಿಸಿ ಕಾಮಗಾರಿ ಅನುಷ್ಠಾನಗೊಳಿಸುವಲ್ಲಿ ನೇರವಾಗಿ ಭಾಗವಹಿಸಿದ್ದರ ಬಗ್ಗೆ ಹೂಡಿರುವ ಕ್ರಿಮಿನಲ್ ಮೊಕದ್ದಮೆಯ ಅಂತಿಮ ಆದೇಶದ ಷರತ್ತಿಗೆ ಒಳಪಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಗೆ,**

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಜಗಳೂರು, ದಾವಣಗೆರೆ ಜಿಲ್ಲೆ.
3. ಶ್ರೀಮತಿ ಚೌಡಮ್ಮ ಕೋಂ ಚಿತ್ರಲಿಂಗಪ್ಪ, ಅಧ್ಯಕ್ಷರು, ಬಿಸ್ತುವಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಿಸ್ತುವಳ್ಳಿ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
6. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.